# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಗ್ರಾಮ ಪಂಚಾಯತಿಗಳ ಮಹಿಳಾ ನೌಕರರಿಗೆ ಪ್ರಸೂತಿ ರಜೆ ಮಂಜೂರಾತಿ – ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:-**

1. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ಮತ್ತು 113.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 67 ಗ್ರಾಪಂಸಿ 2006, ದಿನಾಂಕ: 04-01-2008.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 22 ಗ್ರಾಪಂಸಿ 2014, ದಿನಾಂಕ: 10-09-2014.
4. ಸರ್ಕಾರದ ಆದೇಶ ಸಂಖ್ಯೆ: ಆಇ 4 ಸೇನಿಸೇ 2012, ದಿನಾಂಕ: 14-06-2012.

**ಪ್ರಸ್ತಾವನೆ:**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ರಡಿ ಸರ್ಕಾರವು ಆದೇಶದ ಮೂಲಕ ಗ್ರಾಮ ಪಂಚಾಯತಿಗಳ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು ಮತ್ತು ನೇಮಕಾತಿ ವಿಧಾನವನ್ನು ನಿರ್ದಿಷ್ಟಪಡಿಸಬಹುದಾಗಿದೆ. ಸದರಿ ಅಧಿನಿಯಮ, ಪ್ರಕರಣ 113 ರಂತೆ ಗ್ರಾಮ ಪಂಚಾಯತಿಯು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಪೂರ್ವಾನುಮೋದನೆಯೊಂದಿಗೆ, ಗ್ರಾಮ ಪಂಚಾಯತಿ ನೌಕರರನ್ನು ನೇಮಕ ಮಾಡಿಕೊಂಡು ಗ್ರಾಮ ಪಂಚಾಯತಿ ನಿಧಿಯಿಂದ ಅವರ ಸಂಬಳಗಳನ್ನು ಸಂದಾಯ ಮಾಡಬಹುದಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ಮತ್ತು (3) ರ ಸರ್ಕಾರದ ಅಧಿಕೃತ ಜ್ಞಾಪನ ಮತ್ತು ಸರ್ಕಾರದ ಆದೇಶಗಳಲ್ಲಿ ರಾಜ್ಯದಲ್ಲಿನ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ಸ್ವರೂಪ, ವೇತನ ಮತ್ತು ನೇಮಕಾತಿ ವಿಧಾನವನ್ನು ಸರ್ಕಾರವು ನಿರ್ದಿಷ್ಟಪಡಿಸಲಾಗಿದೆ. ಗ್ರಾಮ ಪಂಚಾಯತಿ ಮಹಿಳಾ ನೌಕರರಿಗೆ ಸಂಪೂರ್ಣ ಸೇವಾ ಅವಧಿಯಲ್ಲಿ 90 ದಿವಸಗಳಿಗೆ ಮೀರದಂತೆ (2 ಬಾರಿ ಮಾತ್ರ) ಪ್ರಸೂತಿ ರಜೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಸರ್ಕಾರದ ಆದೇಶದಲ್ಲಿ ಮಹಿಳಾ ಸರ್ಕಾರಿ ನೌಕರರಿಗೆ 135 ದಿನಗಳ ಪ್ರಸೂತಿ ರಜೆಯ ಅವಧಿಯನ್ನು 180 ದಿನಗಳಿಗೆ ಹೆಚ್ಚಿಸಲಾಗಿದೆ. ಅದರಂತೆ ಗ್ರಾಮ ಪಂಚಾಯತಿಯ ಮಹಿಳಾ ನೌಕರರಿಗೆ 135 ದಿನಗಳ ಪ್ರಸೂತಿ ರಜೆಯ ಅವಧಿಯನ್ನು 180 ದಿನಗಳಿಗೆ ಹೆಚ್ಚಿಸಲು ಸರ್ಕಾರವು ನಿರ್ಧರಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ 73 ಗ್ರಾಪಂಸಿ 2017 ಬೆಂಗಳೂರು, ದಿನಾಂಕ:09-06-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿನ ಮಹಿಳಾ ನೌಕರರಿಗೆ 135 ದಿನಗಳ ಪ್ರಸೂತಿ ರಜೆಯ ಅವಧಿಯನ್ನು 180 ದಿನಗಳಿಗೆ ಹೆಚ್ಚಿಸಿ ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4. ಅಧ್ಯಕ್ಷರು, ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘ (ಸಿ.ಐ.ಟಿ.ಯು), ಸಂಪಂಗಿರಾಮನಗರ, ಬೆಂಗಳೂರು.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.